**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 425 |
| 2 | ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 18-07-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿರುವ ಆರ್.ಟಿ. ನಗರ ಪೋಲೀಸ್ ಠಾಣೆಯಿಂದ ಡಾ:ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯಾದ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಸುಮಾರು 25 ವರ್ಷಗಳ ಹಿಂದೆ ಯೋಜಿಸಿದ್ದು, ಇಲ್ಲಿಯವರೆಗೆ ಈ ಯೋಜನೆಯನ್ನು ಪ್ರಾರಂಭಿಸದಿರುವುದಕ್ಕೆ ಕಾರಣಗಳೇನು; | ಬೆಂಗಳೂರಿನ ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯಾದ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಆರ್.ಎಂ.ಪಿ–2015ರಂತೆ 24.00 ಮೀ ಅಗಲಕ್ಕೆ ಪ್ರಸ್ತಾಪಿಸಲಾಗಿರುತ್ತದೆ.<br><br>ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು 2016–17 ಮತ್ತು 2017–18ನೇ ಸಾಲಿನಲ್ಲಿ ನಗರೋತ್ಥಾನ, ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಮತ್ತು ಸರೋವರ ಅಭಿವೃದ್ಧಿ ಯೋಜನೆ ಅಡಿಯಲ್ಲಿ ರೂ.50.00 ಕೋಟಿಗಳ ಅನುದಾನವನ್ನು ಲಭ್ಯಗೊಳಿಸಲಾಗಿತ್ತು. ಆದರೆ ಸದರಿ ರಸ್ತೆಯ ಇಕ್ಕೆಲಗಳಲ್ಲಿ ಇರುವ ಖಾಸಗಿ ಭೂ–ಮಾಲೀಕರು ಟಿ.ಡಿ.ಆರ್ ಆಧಾರದಲ್ಲಿ ತಮ್ಮ ಭೂಮಿಯನ್ನು ಬಿಟ್ಟುಕೊಡಲು ಒಪ್ಪದೇ ಇದ್ದ ಹಿನ್ನಲೆಯಲ್ಲಿ ಮತ್ತು ನಗದು ರೂಪದಲ್ಲಿ ಭೂ–ಸ್ವಾಧೀನಪಡಿಸಿಕೊಳ್ಳಲು ಸುಮಾರು ರೂ.200.00 ಕೋಟಿಗಳಿಗೂ ಅಧಿಕ ಮೊತ್ತ ಬೇಕಾಗುವುದೆಂದು ಅಂದಾಜಿಸಲಾದ ಹಿನ್ನಲೆಯಲ್ಲಿ ಸದರಿ ಯೋಜನೆಯನ್ನು ಪ್ರಾರಂಭಿಸಲಾಗಿರುವುದಿಲ್ಲ. |
| ಆ) | ಇದರಿಂದಾಗಿ ವಾಹನ ಸವಾರರು, ಆಂಬ್ಯುಲೆನ್ಸ್ ಮತ್ತು ಇತರೆ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿದ್ದು, ಇದಲ್ಲದೇ ವಾಹನ ದಟ್ಟಣೆಯಿಂದ ಪರಿಸರದ ಮೇಲೆಯೂ ಅಡ್ಡ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಹೌದು.<br><br>• ಸದರಿ ವಾಹನ ದಟ್ಟಣೆಯನ್ನು ಕಡಿಮೆಗೊಳಿಸಲು ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೂ ರಸ್ತೆಯ ಸುಗಮ ಸಂಚಾರಕ್ಕಾಗಿ ಡಾಂಬರೀಕರಣವನ್ನು ಮಾಡಲಾಗಿರುತ್ತದೆ.<br><br>• ಸಮೂಹ ಸಾರಿಗೆ ವ್ಯವಸ್ಥೆಯ ಅಡಿಯಲ್ಲಿ (Mass Transport System) ದಿನ್ನೂರು ಮುಖ್ಯರಸ್ತೆಯನ್ನು ಮೆಟ್ರೋ ಕಾಮಗಾರಿ ನಡೆಯುತ್ತಿರುವ ರಸ್ತೆಗೆ ಸಂಪರ್ಕಿಸುವ ನಾಗವಾರ ರಸ್ತೆಗೆ ಸಂಪರ್ಕ ಕಲ್ಪಿಸಲಾಗುತ್ತಿದ್ದು, ವಾಹನ ದಟ್ಟಣೆ ಕಡಿಮೆಗೊಳ್ಳುವ ನಿರೀಕ್ಷೆ ಇರುತ್ತದೆ. |

. . . 2 .

| | | |
|---|---|---|
| | | • ಈ ರಸ್ತೆಯನ್ನು ಹಾಲಿ ಇರುವ ಅಗಲಕ್ಕೆ ಸೀಮಿತಗೊಳಿಸಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸರ್ಕಾರವು 2023-24ನೇ ಆಯವ್ಯಯದಲ್ಲಿ ರೂ.10.19 ಕೋಟಿಗಳನ್ನು ನೀಡಿದ್ದು, ಸದರಿ ಕಾಮಗಾರಿಗೆ ಟೆಂಡರ್ ಅನುಮೋದನೆಗಾಗಿ ಪ್ರಸ್ತಾವನೆ ಮಂಡಿಸಲಾಗಿದೆ. |
| ಇ) | ಇದೇ ರೀತಿ ಟ್ಯಾನರಿ ರಸ್ತೆಯನ್ನು (ಟ್ಯಾನರಿ ರಸ್ತೆಯ ಖಸಾಯಿ ಖಾನೆಯಿಂದ ನಾಗವಾರದವರೆಗೆ) ಸಹ ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲು ಯೋಜಿಸಿದ್ದು, ಈ ಭಾಗದಲ್ಲಿ ಮೆಟ್ರೋ ಕಾರ್ಯ ಪ್ರಾರಂಭವಾಗಿರುವುದರಿಂದ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಮತ್ತು ಅಡಚಣೆಗಳು ಉಂಟಾಗುತ್ತಿದ್ದು, ಯಾವುದೇ ಪರ್ಯಾಯ ವ್ಯವಸ್ಥೆಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು) | ಟ್ಯಾನರಿ ರಸ್ತೆ ಅಗಲೀಕರಣವನ್ನು ಸಹ ಈ ಹಿಂದೆ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದ್ದು, ಆದರೆ ಸದರಿ ರಸ್ತೆಯ ಇಕ್ಕೆಲಗಳಲ್ಲಿ ಇರುವ ಖಾಸಗಿ ಭೂ-ಮಾಲೀಕರು ಟಿ.ಡಿ.ಆರ್ ಆಧಾರದಲ್ಲಿ ತಮ್ಮ ಭೂಮಿಯನ್ನು ಬಿಟ್ಟುಕೊಡಲು ಒಪ್ಪದೇ ಇದ್ದ ಹಿನ್ನಲೆಯಲ್ಲಿ ಮತ್ತು ನಗದು ರೂಪದಲ್ಲಿ ಭೂ-ಸ್ವಾಧೀನ ಪಡಿಸಿಕೊಳ್ಳಲು ಸುಮಾರು ರೂ.300.00 ಕೋಟಿಗಳಿಗೂ ಅಧಿಕ ಮೊತ್ತ ಬೇಕಾಗುವುದೆಂದು ಅಂದಾಜಿಸಲಾದ ಹಿನ್ನೆಲೆಯಲ್ಲಿ ಸದರಿ ಯೋಜನೆಯನ್ನು ಪ್ರಾರಂಭಿಸಲಾಗಿರುವುದಿಲ್ಲ.<br>• ಮೆಟ್ರೋ ಕಾಮಗಾರಿಯನ್ನು ಸಮೂಹ ಸಾರಿಗೆ ವ್ಯವಸ್ಥೆಯ ಅಡಿಯಲ್ಲಿ (Mass Transport System) ಕೈಗೆತ್ತಿಕೊಳ್ಳಲಾಗಿದ್ದು, ಮೆಟ್ರೋ ಸ್ಟೇಷನ್ ಕಾಮಗಾರಿಗಳು ಪೂರ್ಣಗೊಂಡು ಕಾರ್ಯಾರಂಭ ಮಾಡುವುದು 2026ಕ್ಕೆ ಯೋಜಿಸಲಾಗಿದೆ ಎಂದು ಮೆಟ್ರೋ ಅಧಿಕಾರಿಗಳು ತಿಳಿಸಿರುತ್ತಾರೆ.<br>• ಮೆಟ್ರೋ ಸ್ಟೇಷನ್ ಪ್ರದೇಶಗಳನ್ನು ಹೊರತುಪಡಿಸಿ ಹಾಲಿ ಇರುವ ರಸ್ತೆ ಅಗಲಕ್ಕೆ ಸೀಮಿತಗೊಳಿಸಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿ ದಿನಾಂಕ: 13-03-2024 ರಂದು ರೂ.23.22 ಕೋಟಿಗಳಿಗೆ ಕಾರ್ಯಾದೇಶವನ್ನು ನೀಡಲಾಗಿರುತ್ತದೆ.<br>• ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು 11 ತಿಂಗಳ ಕಾಲಮಿತಿಯನ್ನು ನಿಗದಿಪಡಿಸಲಾಗಿರುತ್ತದೆ. |

**ನಅಇ 342 ಎಂಎನ್‌ವೈ 2024**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ